**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು.**

**<u>ಅಸಲು ದಾವೆ ಸಂಖ್ಯೆ. 467/2022</u>**

**ಪಿ.ಡಬ್ಲ್ಯು:1**

**ದಿನಾಂಕಃ 14-10-2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಖ್ಯ ವಿಚಾರಣೆಃ ವಾದಿಪರ: ಶ್ರೀ. ಜಿ.ಎನ್.ವಿ. ವಕೀಲರಿಂದಃ-</u>**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸುತ್ತಿದ್ದೇನೆ. ಅದನ್ನು ಓದಿ ತಿಳಿದು, ಸಹಿ ಮಾಡಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ. ಸಾಕ್ಷಿಯು ಕೆಳಕಂಡ ದಾಖಲಾತಿಗಳನ್ನು ನೋಡಿ ಗುರುತಿಸಿರುತ್ತಾರೆ.

ದಿನಾಂಕ 10.09.2001 ರ ಕ್ರಯ ಕರಾರು ಒಪ್ಪಂದ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.1 ಎಂದು(ಸದರಿ ಕ್ರಯ ಕರಾರು ಒಪ್ಪಂದ ಪತ್ರಕ್ಕೆ ಸಂಬಂಧಿಸಿದಂತೆ ಕಡಿಮೆ ಮುದ್ರಾಂಕ ಶುಲ್ಕ ಮತ್ತು ದಂಡವನ್ನು ಜಿಲ್ಲಾ ನೊಂದಾಣಾಧಿಕಾರಿಯವರಿಗೆ ಪಾವತಿಸಲಾಗಿರುತ್ತದೆ), ದಿನಾಂಕ 11.04.2022 ರಂದು ಚಿಕ್ಕಮಗಳೂರಿನ ಜಿಲ್ಲಾ ನೊಂದಣಾಧಿಕಾರಿಗಳು ಕ್ರಯ ಕರಾರು ಒಪ್ಪಂದ ಪತ್ರಕ್ಕೆ ಸಂಬಂಧಿಸಿದಂತೆ ಕೊರತೆ ಮುದ್ರಾಂಕ ಶುಲ್ಕ ಮತ್ತು ದಂಡವನ್ನು ಕುರಿತು ಮಾಡಿದ ಆದೇಶದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.2 ಎಂದು, ಇ-ಖಾತಾ ನಕಲಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.3 ಎಂದು, ದಿನಾಂಕ 22.04.2022 ರ ಕಾನೂನು ತಿಳುವಳಿಕೆ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.4 ಎಂದು, ಅಂಚೆ ರಶೀದಿಯನ್ನು ನಿಪಿ.5 ಎಂದು, ಅಂಚೆ ಸ್ವೀಕೃತಿಯನ್ನು ನಿಪಿ.6 ಎಂದು, ಜವಾಬು ನೋಟೀಸನ್ನು ನಿಪಿ.7 ಎಂದು, ವಂಶವೃಕ್ಷದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.8 ಎಂದು, 1 ನೇ ವಾದಿಯ ಗಂಡನ ಮರಣ ಪ್ರಮಾಣಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.9 ಎಂದು ಗುರುತಿಸಲಾಯಿತು.

**(ಪ್ರತಿವಾದಿ ಪರ ವಕೀಲರು ತಮ್ಮ ಪರ ಪ್ರತಿವಾದ ಪತ್ರವನ್ನು ಸಲ್ಲಿಸದೆ ಇರುವುದರಿಂದ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಗಿದೆ)**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದ್ದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)**

ಓ ಹೇ ಕೇ ಸ ಇ

ಸಹಿ/-
2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ:ದಃನ್ಯಾಃದಂ.,ರವರು ಕಡೂರು.